ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1568 (1825)

2) ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ ರಾಥೋಡ್ (ನಾಮನಿರ್ದೇಶನ ಹೊಂದಿದವರು)

3) ಉತ್ತರಿಸುವ ದಿನಾಂಕ : 22.03.2021

4) ಉತ್ತರಿಸುವವರು : ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು

<table>
<tr><th>ಕ್ರಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಯಾವ ಯಾವ ಪ್ರದೇಶಗಳಲ್ಲಿ ಆನೆಗಳು ಹಾಗೂ ಇತರೆ ಪ್ರಾಣಿಗಳ ದಾಳಿ ನಡೆಯುತ್ತಿವೆ;</td><td>ರಾಜ್ಯದಲ್ಲಿ ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ, ಕೋಲಾರ, ಬೆಂಗಳೂರು, ಹಾಸನ, ಚಿಕ್ಕಮಗಳೂರು, ಶಿವಮೊಗ್ಗ, ಉತ್ತರ ಕನ್ನಡ, ಬೆಳಗಾವಿ ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ಇರುತ್ತದೆ. ಕೊಡಗು, ಮೈಸೂರು, ಚಾಮರಾಜನಗರ ಜಿಲ್ಲೆಗಳಲ್ಲಿ ಹುಲಿ ಹಾವಳಿ ಕಂಡುಬರುತ್ತದೆ. ಅಲ್ಲದೇ ತುಮಕೂರು, ಚಿತ್ರದುರ್ಗ, ದಾವಣಗೆರೆ, ಬಳ್ಳಾರಿ, ಕೊಪ್ಪಳ, ಮಂಗಳೂರು, ಬಾಗಲಕೋಟೆ ಜಿಲ್ಲೆಗಳಲ್ಲಿ ಚಿರತೆ ಮತ್ತು ಇತರೆ ವನ್ಯಪ್ರಾಣಿಗಳ ಹಾವಳಿ ಕಂಡುಬರುತ್ತದೆ.</td></tr>
<tr><td>ಆ)</td><td>ಆನೆಗಳ ದಾಳಿಗಳಿಂದ ಹಾಗೂ ವನ್ಯಜೀವಿಗಳಿಂದ ಎಷ್ಟು ಬೆಳೆ ಹಾನಿಯಾಗಿವೆ;</td><td>ಕಳೆದ ಮೂರು ವರ್ಷಗಳಲ್ಲಿ ಕಾಡಾನೆ ಒಳಗೊಂಡಂತೆ ಇತರೆ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಬೆಳೆಹಾನಿ ಪ್ರಕರಣ ಮತ್ತು ಪಾವತಿಸಲಾದ ದಯಾತ್ಮಕ ಧನದ ವಿವರ ಈ ಕೆಳಕಂಡಂತಿದೆ:
<table><tr><th>ವರ್ಷ</th><th>ಬೆಳೆಹಾನಿ ಪ್ರಕರಣ ಸಂಖ್ಯೆ</th><th>ಪಾವತಿಸಿದ ಮೊತ್ತ (ರೂ. ಲಕ್ಷಗಳಲ್ಲಿ)</th></tr><tr><td>2018-19</td><td>19913</td><td>1028.30</td></tr><tr><td>2019-20</td><td>20951</td><td>1122.90</td></tr><tr><td>2020-21 (ಫೆಬ್ರವರಿ-2021ರ ಅಂತ್ಯಕ್ಕೆ)</td><td>10316</td><td>620.86</td></tr></table></td></tr>
</table>

....2

ಕ್ರ.ಸಂ	ಪ್ರಶ್ನೆ	ಉತ್ತರ
ಇ)	ವನ್ಯಜೀವಿಗಳ ದಾಳಿ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?	ವನ್ಯಪ್ರಾಣಿಗಳು ನಗರ / ಪಟ್ಟಣದ ವಸತಿ ಪ್ರದೇಶಗಳಿಗೆ ಬರುವುದನ್ನು ತಡೆಯಲು ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ: 1. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನ ಗೊಳಿಸಿ ವನ್ಯಪ್ರಾಣಿಗಳ ಆವಾಸಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ. 2. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. 3. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆ ತಡೆಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ. 4. ಕಳ್ಳಬೇಟೆ ತಡೆ ಶಿಬಿರಗಳಿಗೆ (Anti Poaching Camp) ಹಾಗೂ ಕ್ಷಿಪ್ರ ಕಾರ್ಯಾಚರಣೆ ಪಡೆ (Rapid Response Teams) ಗಳನ್ನು ಅಂದರೆ ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ ಹಾಗೂ Wireless Networking ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ. 5. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ. 6. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮವಹಿಸಲಾಗುತ್ತಿದೆ.

....3

ಕ್ರ.ಸಂ	ಪ್ರಶ್ನೆ	ಉತ್ತರ
		7. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗಿಂದಾಗ್ಗೆ ಆನೆ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. 8. ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಹಾನಿ ಪ್ರಕರಣಗಳಲ್ಲಿ ದಯಾತ್ಮಕ ಧನವನ್ನು ಪಾವತಿಸಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ–ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆದ್ಯತೆ ಮೇರೆಗೆ ಸರ್ಕಾರದ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ತರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ಇ–ಪರಿಹಾರ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ.

ಸಂಖ್ಯೆ: ಅಪಜೀ 76 ಎಫ್‌ಡಬ್ಲ್ಯೂಎಲ್ 2021

(ಅರವಿಂದ ಲಿಂಬಾವಳಿ)
ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವರು